# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 2270 |
| ಸದಸ್ಯರ ಹೆಸರು | : | ಶ್ರೀ ಎಸ್.ರವಿ<br>(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | : | 21.03.2022 |
| ಉತ್ತರಿಸುವ ಸಚಿವರು | : | ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ | | |
|---|---|---|---|---|
| ಅ) | ಪ್ರಸಕ್ತ ಶೈಕ್ಷಣಿಕ ವರ್ಷದಲ್ಲಿ ಸುರಿದ ಭಾರಿ ಮಳೆಯಿಂದ ರಾಮನಗರ ಜಿಲ್ಲೆಯ ಬಾಲಕರ ಸರ್ಕಾರಿ ಪದವಿ ಪೂರ್ವ ಕಾಲೇಜು, ರಾಮನಗರ ಟೌನ್ (ಹಳೆ ಕಟ್ಟಡ) ಸರ್ಕಾರಿ ಪದವಿ ಪೂರ್ವ ಕಾಲೇಜು, ಕೂನಗಲ್ ಮತ್ತು ಸರ್ಕಾರಿ ಪದವಿ ಪೂರ್ವ ಕಾಲೇಜು, ಮಾಗಡಿ ಟೌನ್ ಕಾಲೇಜುಗಳ ಮೇಲ್ಛಾವಣಿ ಸೋರುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಇವುಗಳ ದುರಸ್ಥಿಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು; (ವಿವರ ನೀಡುವುದು) | ಬಂದಿದೆ | | |
| | | 1 | ಸರ್ಕಾರಿ ಪದವಿ ಪೂರ್ವಕಾಲೇಜು ಮಾಗಡಿಟೌನ್. | ಸದರಿ ಕಾಲೇಜಿನಲ್ಲಿ ಪ್ರೌಢ ಶಾಲಾ ವಿಭಾಗದಲ್ಲಿ ಒಟ್ಟು 16 ಕೊಠಡಿಗಳಿರುತ್ತವೆ. ಈ ಶಾಲೆಯ ಅಭಿವೃದ್ಧಿ ಈ ಕೆಳಕಂಡಂತೆ ಕ್ರಮವಹಿಸಲಾಗಿದೆ.<br>ಸದರಿ ಶಾಲೆಗೆ ಸಿ.ಎಸ್.ಆರ್. ಯೋಜನೆಯಡಿ ಹೊಸ 08 ಕೊಠಡಿಗಳ ನಿರ್ಮಾಣಕ್ಕಾಗಿ ಕ್ರಿಯಾ ಯೋಜನೆ ರೂಪಿಸಲಾಗಿದೆ.<br>ಪಿ.ಆರ್.ಇ.ಡಿ ವಿಭಾಗದಲ್ಲಿ 03 ವರ್ಷಗಳ ಕಾಮಗಾರಿಗಳ ಉಳಿಕೆ ಅನುದಾನದಲ್ಲಿ ರೂ.15.75 ಲಕ್ಷಗಳ ವೆಚ್ಚದಲ್ಲಿ ನೂತನ ಕೊಠಡಿ ನಿರ್ಮಾಣಕ್ಕಾಗಿ 2021-22ನೇ ಸಾಲಿನಲ್ಲಿ ಮಂಜೂರಾತಿ ನೀಡಲಾಗಿದೆ. |
| | | 2 | ಬಾಲಕರ ಸರ್ಕಾರಿ ಪದವಿ ಪೂರ್ವಕಾಲೇಜು, ರಾಮನಗರ ಟೌನ್. | ಸದರಿ ಕಾಲೇಜಿನಲ್ಲಿ ಪ್ರೌಢ ಶಾಲಾ ವಿಭಾಗದ ಒಟ್ಟು ಹಳೆಯ ಒಟ್ಟು 10 ಕೊಠಡಿಗಳಿರುತ್ತವೆ.<br>ಈ ಕಾಲೇಜಿನ ಹಳೆಯ 11 ಕೊಠಡಿಗಳನ್ನು ಕೆಡವಿ ಸರ್ಕಾರದ ಆದೇಶ ಸಂಖ್ಯೆ:ಇಡಿ 251 ಯೋಸಕ 2018, ಬೆಂಗಳೂರು ದಿನಾಂಕ:05.09.2018ರ ಆದೇಶದಂತೆ ರೂ.495.00 ಲಕ್ಷಗಳಲ್ಲಿ ಒಟ್ಟು 33 ಕೊಠಡಿಗಳ ಹೊಸ ಕಟ್ಟಡದ ನಿರ್ಮಾಣ ಕಾರ್ಯವನ್ನು ಪಿ.ಡಬ್ಲ್ಯೂಡಿ ವತಿಯಿಂದ ಕೈಗೆತ್ತಿಗೊಳ್ಳಲಾಗಿದೆ. ಕಾಮಗಾರಿ ಅಂತಿಮ ಹಂತದಲ್ಲಿದೆ.<br>(ಇದರಲ್ಲಿ ಕಾಲೇಜು ಮತ್ತು ಪ್ರೌಢ ಶಾಲೆ ಎರಡಕ್ಕೂ ಕೊಠಡಿಗಳ ಸೌಲಭ್ಯವಿರಲಿದೆ). |

| | | |
|---|---|---|
| 3 | ಸರ್ಕಾರಿ ಪದವಿ ಪೂರ್ವ ಕಾಲೇಜು ಕೂನಗಲ್ | ಸದರಿ ಕಾಲೇಜಿನಲ್ಲಿ ಪ್ರೌಢ ಶಾಲಾ ವಿಭಾಗದಲ್ಲಿ ಒಟ್ಟು 10 ಕೊಠಡಿಗಳಿರುತ್ತವೆ |

ಪದವಿಪೂರ್ವ ಶಿಕ್ಷಣ ಇಲಾಖೆಯಡಿ ಸದರಿ ಕಾಲೇಜುಗಳಿಗೆ ಮಂಜೂರಾದ ಕಾಮಗಾರಿಗಳ ವಿವರ ಈ ಕೆಳಕಂಡಂತಿದೆ.

| ಸರ್ಕಾರಿ ಪದವಿ ಪೂರ್ವ ಕಾಲೇಜಿನ ಹೆಸರು | ಕಾಮಗಾರಿ ವಿವರ | ಅನುಮೋದಿತ ಮೊತ್ತ (ರೂ.ಲಕ್ಷಗಳಲ್ಲಿ) | ಯೋಜನೆ | ಭೌತಿಕ ಪ್ರಗತಿ |
|---|---|---|---|---|
| ಬಾಲಕರು ರಾಮನಗರ (ಎ ಬ್ಲಾಕ್) | ಕಟ್ಟಡ ನಿರ್ಮಾಣ | 495.00 | ವಿಶೇಷ ಪ್ಯಾಕೇಜ್ | ಕಾಮಗಾರಿ ಪ್ರಗತಿಯಲ್ಲಿದೆ. |
| ಬಾಲಕರು ರಾಮನಗರ (ಬಿ ಬ್ಲಾಕ್) | ಕಟ್ಟಡ ನಿರ್ಮಾಣ | 495.00 | | |
| ಮಾಗಡಿ ಟೌನ್ | 06 ಹೆಚ್ಚುವರಿ ತರಗತಿ ಕೊಠಡಿ, 02 ಶೌಚಾಲಯ ಬ್ಲಾಕ್, 02 ಲ್ಯಾಬ್ | 145.00 | ವಿಶೇಷ ಅಭಿವೃದ್ಧಿ ಯೋಜನೆ | ಕಾಮಗಾರಿ ಪ್ರಗತಿಯಲ್ಲಿದೆ. |

ಕೂನಗಲ್ ಸರ್ಕಾರಿ ಪದವಿ ಪೂರ್ವ ಕಾಲೇಜಿನಲ್ಲಿ ಕಳೆದ 03 ವರ್ಷಗಳಿಂದ 20 ರಿಂದ 25 ವಿದ್ಯಾರ್ಥಿಗಳು ದಾಖಲಾಗುತ್ತಿದ್ದು, ಪ್ರಸ್ತುತ ಸಾಲಿನಲ್ಲಿ 60 ವಿದ್ಯಾರ್ಥಿಗಳು ದಾಖಲಾಗಿರುತ್ತಾರೆ. ಪ್ರಸಕ್ತ ಶೈಕ್ಷಣಿಕ ವರ್ಷದಲ್ಲಿ ಸುರಿದ ಭಾರಿ ಮಳೆಯಿಂದ ಮೇಲ್ಚಾವಣಿ ಸೋರುತ್ತಿದ್ದು, ದುರಸ್ಥಿ ಅವಶ್ಯಕತೆ ಇರುತ್ತದೆ. ಅನುದಾನದ ಲಭ್ಯತೆ ಆಧರಿಸಿ ದುರಸ್ಥಿ ಕಾರ್ಯ ಕೈಗೊಳ್ಳಲು ಅಗತ್ಯ ಕ್ರಮವಹಿಸಲಾಗುತ್ತದೆ.

| | | |
|---|---|---|
| ಆ) | ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೊಡ್ಡಬಳ್ಳಾಪುರ ತಾಲ್ಲೂಕಿನ ಬೊಮ್ಮನಹಳ್ಳಿ ಗ್ರಾಮದ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆ ಮತ್ತು ಹೊಸಕೋಟೆ ತಾಲ್ಲೂಕಿನ ಎತ್ತಿನೊಡೆಯಪುರ ಗ್ರಾಮದ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಗಳು ಬಳಕೆಗೆ ಯೋಗ್ಯವಿರದೇ ಇರುವುದರಿಂದ ಈ ಶಾಲೆಗಳ | ಬಂದಿದೆ.<br><br>1. ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೊಡ್ಡಬಳ್ಳಾಪುರ ತಾಲ್ಲೂಕಿನ ಸ.ಹಿ.ಪ್ರಾ.ಶಾಲೆ ಬೊಮ್ಮನಹಳ್ಳಿ ಈ ಶಾಲೆಯಲ್ಲಿ 10 ವಿದ್ಯಾರ್ಥಿಗಳು ವ್ಯಾಸಂಗ ಮಾಡುತ್ತಿದ್ದಾರೆ. ಈ ಸಾಲಿನಲ್ಲಿ ಅಧಿಕವಾಗಿ ಸುರಿದ ಮಳೆಯಿಂದಾಗಿ ಶಾಲಾ ಕೊಠಡಿ ಶಿಥಿಲಗೊಂಡಿದ್ದು, ಮಕ್ಕಳ ಸುರಕ್ಷತೆಯ ದೃಷ್ಟಿಯಿಂದ ಶಾಲೆಯನ್ನು ಸಮೀಪದ ಅಂಗನವಾಡಿ ಕೇಂದ್ರದಲ್ಲಿ ನಡೆಸಲಾಗುತ್ತಿದೆ. ಶಿಥಿಲಗೊಂಡಿರುವ ಕೊಠಡಿಯನ್ನು |

| | | |
|---|---|---|
| | ವಿದ್ಯಾರ್ಥಿಗಳಿಗೆ ಆಯಾ ಊರಿನ ದೇವಸ್ಥಾನ ಮತ್ತು ಅಂಗನವಾಡಿ ಕಟ್ಟಡದಲ್ಲಿ ಬದಲಿ ವ್ಯವಸ್ಥೆ ಕಲ್ಪಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಶಾಲೆಗಳಿಗೆ ಅಗತ್ಯವಿರುವ ಕೊಠಡಿ ಮತ್ತು ಮೂಲಸೌಲಭ್ಯಗಳನ್ನು ಒದಗಿಸಲಾಗಿದೆಯೇ? (ಸಂಪೂರ್ಣ ವಿವರ ನೀಡುವುದು) | ನೆಲಸಮಗೊಳಿಸುವ ಬಗ್ಗೆ ತಾಂತ್ರಿಕ ವರದಿ ನೀಡುವಂತೆ ಪಂಚಾಯತ್‌ರಾಜ್ ಇಂಜಿನಿಯರಿಂಗ್ ವಿಭಾಗದವರಿಗೆ ಪ್ರಸ್ತಾವನೆ ಸಲ್ಲಿಸಲಾಗಿದೆ. ಸಿ.ಎಸ್.ಆರ್ ಅನುದಾನದಡಿ ಕೊಠಡಿ ಮರುನಿರ್ಮಾಣ ಮಾಡಲು ಕ್ರಮವಹಿಸಿದೆ.<br>2. ಹೊಸಕೋಟೆ ತಾಲ್ಲೂಕಿನ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆ, ಎತ್ತಿನೊಡೆಯಪುರ ಈ ಶಾಲೆಯಲ್ಲಿ 07 ವಿದ್ಯಾರ್ಥಿಗಳು ವ್ಯಾಸಂಗ ಮಾಡಿತ್ತಿದ್ದಾರೆ. ಈ ಸಾಲಿನಲ್ಲಿ ಅಧಿಕವಾಗಿ ಸುರಿದ ಮಳೆಯಿಂದಾಗಿ ಇದ್ದ 02 ಶಾಲಾ ಕೊಠಡಿಗಳು ಶಿಥಿಲಗೊಂಡಿದ್ದು, ಮಕ್ಕಳ ಸುರಕ್ಷತೆಯ ದೃಷ್ಟಿಯಿಂದ ಶಾಲೆಯನ್ನು ಸಮೀಪದ ಅಂಗನವಾಡಿ ಕೇಂದ್ರದಲ್ಲಿ ನಡೆಸಲಾಗುತ್ತಿದೆ. ಸದರಿ ಶಾಲೆಗೆ ಸಿ.ಎಸ್.ಆರ್ ಅನುದಾನದಡಿ ಕೊಠಡಿ ಮರುನಿರ್ಮಾಣ ಮಾಡಲು ಕ್ರಮವಹಿಸಿದೆ.<br><br>ಮುಂದುವರೆದು, ಶಾಲಾ ಕಟ್ಟಡಗಳ ದುರಸ್ಥಿಗಾಗಿ ರಾಜ್ಯ/ಜಿಲ್ಲಾ ವಿಪತ್ತು ನಿರ್ವಹಣಾ ನಿಧಿಯಡಿ ಹಾಗೂ ಇತರೆ ಲಭ್ಯವಿರುವ ಅನುದಾನ (ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ಯೋಜನೆ ಮತ್ತು ಡಿ.ಎಂ.ಎಫ್ ಯೋಜನೆಯಡಿ) ಬಿಡುಗಡೆ ಮಾಡಲು ಆಯಾ ಜಿಲ್ಲಾಧಿಕಾರಿಗಳಿಗೆ ಮತ್ತು ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯ ನಿರ್ವಹಣಾಧಿಕಾರಿಗಳಿಗೆ ಪ್ರಸ್ತಾವನೆ ಸಲ್ಲಿಸಿ ಅನುದಾನವನ್ನು ಬಿಡುಗಡೆ ಮಾಡಿಸಿಕೊಂಡು ಶಾಲಾ ಕಟ್ಟಡಗಳ ದುರಸ್ಥಿಯನ್ನು ಶೀಘ್ರವಾಗಿ ಕೈಗೊಳ್ಳುವಂತೆ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ಇವರ ಸುತ್ತೋಲೆ ದಿನಾಂಕ:19.11.2021ರಲ್ಲಿ ರಾಜ್ಯದ ಎಲ್ಲಾ ಉಪನಿರ್ದೇಶಕರು (ಆಡಳಿತ) ಹಾಗೂ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ನಿರ್ದೇಶಿಸಲಾಗಿದೆ.<br>ಮಹಾತ್ಮಾ ಗಾಂಧಿ ನರೇಗಾ ಯೋಜನೆ ಅಡಿಯಲ್ಲಿ ಶಾಲೆಗಳಿಗೆ ಅಗತ್ಯವಿರುವ ಮೂಲಭೂತ ಸೌಕರ್ಯಗಳನ್ನು ಒದಗಿಸಲು 14 ಮತ್ತು 15ನೇ ಹಣಕಾಸು ಆಯೋಗದಲ್ಲಿ ಸಂಬಂಧಿಸಿದ ಗ್ರಾಮ ಪಂಚಾಯತಿಗಳಿಗೆ ಅವಕಾಶ ಕಲ್ಪಿಸಲಾಗಿದೆ. ಈ ಹಿನ್ನೆಲೆಯಲ್ಲಿ ಕ್ರಮವಹಿಸಲು ಸುತ್ತೋಲೆ ಸಂಖ್ಯೆ:ಗ್ರಾಅಪಂರಾ 435 ಜಿಪಸ 2021, ದಿನಾಂಕ:08.11.2021ರ ಮೂಲಕ ಸುತ್ತೋಲೆ ಹೊರಡಿಸಲಾಗಿದೆ.<br>ಆಯವ್ಯಯದಲ್ಲಿ ಒದಗಿಸಲಾದ ಅನುದಾನದ ಲಭ್ಯತೆ ಹಾಗೂ ಅಗತ್ಯತೆಗೆ ಅನುಗುಣವಾಗಿ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಶಾಲೆಗಳು ಒಳಗೊಂಡಂತೆ ಹಂತಹಂತವಾಗಿ ರಾಜ್ಯದಾದ್ಯಂತ ಶಾಲಾ ಕಟ್ಟಡ ನಿರ್ಮಾಣ/ದುರಸ್ಥಿ ಕಾರ್ಯಕೈಗೊಳ್ಳಲು ಕ್ರಮವಹಿಸಲಾಗುತ್ತಿದೆ. |

**ಇಪಿ: 125 ಯೋಸಕ 2022**

(ಬಿ.ಸಿ.ನಾಗೇಶ್)
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು